ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ-563 103

---

ಸಂಖ್ಯೆ : ಬೆಂಉ.ವಿ/ಬಿ.ಇಡಿ/ಸಂಯೋಜನೆ/ 236 / 2020-21 ದಿನಾಂಕ: 20.03.2021

**ಅಧಿ ಸೂಚನೆ**

**ವಿಷಯ:** 2020-21ನೇ ಶೈಕ್ಷಣಿಕ ಸಾಲಿಗೆ ಶಿಕ್ಷಣ ಕಾಲೇಜು ಸಂಯೋಜನೆ ನವೀಕರಿಸುವ ಬಗ್ಗೆ.

**ಉಲ್ಲೇಖ:** 1. ಅಸಾಮಾನ್ಯ ವಿದ್ಯಾವಿಷಯಕ ಪರಿಷತ್ತಿನ ಸಭೆಯ ನಡಾವಳಿ ದಿನಾಂಕ: 01.03.2021
2. ಅಸಾಮಾನ್ಯ ಸಿಂಡಿಕೇಟ್ ಸಭೆಯ ನಡಾವಳಿ ದಿನಾಂಕ: 03.03.2021
3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 12.03.2021

*****

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯುಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು 2020-21ನೇ ಶೈಕ್ಷಣಿಕ ಸಾಲಿಗೆ ಈ ಕೆಳಕಂಡ ಶಿಕ್ಷಣ ಕಾಲೇಜಿನಲ್ಲಿ ನಡೆಸಲಾಗುತ್ತಿರುವ ಬಿ.ಇಡಿ ಕೋರ್ಸಿಗೆ ಅದರ ಮುಂದೆ ನಮೂದಿಸಿರುವ ವಿದ್ಯಾರ್ಥಿ ಪ್ರಮಾಣದೊಂದಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಲಾಗಿದೆ.

| ಕ್ರಮ ಸಂಖ್ಯೆ | ಕಾಲೇಜಿನ ಹೆಸರು ಮತ್ತು ವಿಳಾಸ | ಕೋರ್ಸ್ | ವಿದ್ಯಾರ್ಥಿ ಪ್ರಮಾಣ |
|---|---|---|---|
| **01** | **ರವಿ ಕಾಲೇಜ್ ಆಫ್ ಎಜುಕೇಷನ್ 2ನೇ ಕ್ರಾಸ್, ಗೌರಿಪೇಟೆ, ಕೋಲಾರ-563 101.** | ಬಿ.ಇಡಿ | **100** |

**ವಿ.ಸೂ:** 2020-21ನೇ ಶೈಕ್ಷಣಿಕ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜುಗಳಿಗೆ ಸಿಂಡಿಕೇಟ್ ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು, ಇಲ್ಲವಾದಲ್ಲಿ ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.

**ಷರತ್ತುಗಳು:**

1. ವಿಧ್ಯಾರ್ಥಿಗಳ ಪ್ರವೇಶವನ್ನು ಕಾಲಕಾಲಕ್ಕೆ ತಿದ್ದಪಡಿಯಾದ ಕರ್ನಾಟಕ ಬಿ.ಇಡಿ ಕೋರ್ಸು ಅಭ್ಯರ್ಥಿಗಳ ಆಯ್ಕೆ ನಿಯಮಗಳನ್ವಯ ಕಟ್ಟು- ನಿಟ್ಟಾಗಿ ಪಡೆಯತಕ್ಕದ್ದು,
2. ಕರ್ನಾಟಕ ಬಿ.ಇಡಿ ಕೋರ್ಸುಗಳಿಗೆ ಅಭ್ಯರ್ಥಿಗಳ ಆಯ್ಕೆ ನಿಯಮಗಳು 1999 ರ 2(1)ನೇ ನಿಯಮದಡಿಯಲ್ಲಿ ನಿರ್ಧರಿಸಲಾಗಿರುವ ವಿಧ್ಯಾರ್ಥಿ ಪ್ರಮಾಣಕ್ಕೆ ಅನುಗುಣವಾಗಿ ಮತ್ತು ಪೂರಕವಾಗಿ ವಿಧಿಸಲಾಗಿರುವ ಷರತ್ತುಗಳಿಗೊಳಪಟ್ಟು ವಿಧ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು,
3. ಕಾಲೇಜು ಎನ್.ಸಿ.ಟಿ.ಇ ಅಧಿನಿಯಮ 1993ರ 14ನೇ ಪ್ರಕರಣದಡಿ ಮಾನ್ಯತೆಯನ್ನು ಹೊಂದಿರತಕ್ಕದ್ದು.
4. ಕಾಲೇಜು **ಎನ್.ಸಿ.ಟಿ.ಇ ಜಾರಿಗೊಳಿಸಿರುವ ನೋಟಿಸ್‌ನಲ್ಲಿ ನಿರ್ಧಿಷ್ಠ ಪಡಿಸಲಾಗಿರುವ ಷರುತ್ತುಗಳನ್ನು ಕಟ್ಟು-ನಿಟ್ಟಾಗಿ ಪೂರೈಸತಕ್ಕದ್ದು. ಎನ್.ಸಿ.ಟಿ.ಇ ಮಾನ್ಯತೆ ಹೊಂದದ ಹೊರತು ಕಾಲೇಜು ವಿಧ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದಲ್ಲ.**
5. **ಕಾಲೇಜು ಹೆಸರು, ಕಟ್ಟಡ, ಸ್ಥಳ ಬದಲಾವಣೆಗೆ ಎನ್.ಸಿ.ಟಿ.ಇ ಸರ್ಕಾರ ಮತ್ತು ವಿಶ್ವವಿದ್ಯಾಲಯ ಅನುಮತಿಯನ್ನು ಕಡ್ಡಾವಾಗಿ ಪಡೆಯತಕ್ಕದ್ದು.**
6. ನಿರ್ಧಿಷ್ಠ ವಿನಾಯಿತಿ ನೀಡಿದ ಹೊರತು ವಿಶ್ವವಿದ್ಯಾಲಯ ಮಂಜೂರು ಮಾಡಿರುವ ಮುಂದುವರಿಕೆ ಸಂಯೋಜನೆ ಮತ್ತು ಎನ್.ಸಿ.ಟಿ.ಇ ಮಂಜೂರು ಮಾಡಿರುವ ಮಾನ್ಯತೆ ರಹಿತವಾಗಿ ವಿಧ್ಯಾರ್ಥಿಗಳ ಪ್ರವೇಶ ಪಡೆಯುವುದು, **ಕರ್ನಾಟಕ ಮಾನ್ಯತೆ ರಹಿತ ಮತ್ತು ಅಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ವಿಧ್ಯಾರ್ಥಿಗಳ ಪ್ರವೇಶ ನಿಷೇದ ಅಧಿನಿಯಮ 1992ರ 3ನೇ ಪ್ರಕರಣದ ಉಲ್ಲಂಘನೆಯಾಗಿದ್ದು ಮೊಕದ್ದಮೆ ಹೂಡಲು ಆಕರ್ಷಿತವಾಗಿರುತ್ತದೆ.**

KOLAR 23/3

7. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಪಡೆಯುವುದು ಕೆ.ಎಸ್.ಯು. ಅಧಿನಿಯಮ 2000ದ 60ನೇ ಪ್ರಕರಣದ ಉಲ್ಲಂಘನೆಯಲ್ಲಿದೆ ಮೇಲ್ಕಂಡ 1992ರ ಅಧಿನಿಯಮ 4ನೇ ಪ್ರಕರಣದ ಉಲ್ಲಂಘನೆ ಸಹ ಆಗಿದ್ದು, ಮೊಕದ್ದಮೆ ಹೂಡಲು ಆರ್ಕಷಿತವಾಗುವುದಲ್ಲದೆ ಸೊಯೋಜನೆ ಹಿಂತೆಗೆದುಕೊಳ್ಳಲು ಸಕಾರಣವಾಗುತ್ತದೆ.
8. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಷರುತ್ತಗಳನ್ನು ಕಟ್ಟು–ನಿಟ್ಟಾಗಿ ಪಾಲಿಸತಕ್ಕದ್ದು.
9. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ / ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು, ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಸಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.
10. ವೈಶಾಕ V/S ರಾಜಸ್ಥಾನದ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ: 13.08.1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಬೋಧಕ/ ಬೋಧಕೇತರ/ ಆಡಳಿತ ಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ / ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯಾದ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ / ವಿದ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ / ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು / ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.
11. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೊಧಕರುಗಳನ್ನು ಪ್ರಾಂಶುಪಾಲರು / ಆಡಳಿತಮಂಡಳಿಯವರು ಸಹಾನುಭೂತಿಯಿಂದ ನೋಡಿಕೋಳ್ಳತಕ್ಕದ್ದು.
12. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮಿರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ಅವರಿಗೆ ವತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.
13. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದ್ದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ / ಸೆಮೀಸ್ಟರ್‌ನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರೆತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.
14. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.
15. 2021–22ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.
16. **ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳ ನ್ಯಾಕ್ (NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.**
17. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.
18. ಪ್ರತಿ ಕಾಲೇಜು ಆಯಾ ಶೈಕ್ಷಣಿಕ ವರ್ಷದಲ್ಲಿ ಕನಿಷ್ಠ ಎರಡು ಆಡಳಿತ ಮಂಡಳಿ (Governing Council) ಸಭೆಗಳನ್ನು ಕಡ್ಡಾಯವಾಗಿ ನಡೆಸಿ ವರದಿಯನ್ನು ವಿಶ್ವವಿದ್ಯಾಲಯಕ್ಕೆ ತಪ್ಪದೇ ಸಲ್ಲಿಸತಕ್ಕದ್ದು.

ಆದೇಶಾನುಸಾರ

23/3

ಕುಲಸಚಿವರು

ಕುಲಸಚಿವರು

ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಟಮಕಾ, ಕೋಲಾರ – ಕರ್ನಾಟಕ – 563 103.

ಗೆ,

ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಗೆ,

ಪ್ರತಿಗಳು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು – 560 001
2. ನಿರ್ದೇಶಕರು, ಕಾಲೇಜು ಶಿಕ್ಷಣ ಆಯುಕ್ತರು, ಬೆಂಗಳೂರು – 560 001.
3. ಕುಲಸಚಿವರು (ಮೌ), ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ– 563 103.
4. ಅಧ್ಯಕ್ಷರು ಎನ್.ಸಿ.ಟಿ.ಇ., ಎಸ್.ಆರ್.ಸಿ.ಎಫ್., ನ್ಯಾಷನಲ್ ಲಾ ಸ್ಕೂಲ್ ಎದುರು, ನಾಗರಭಾವಿ ಬೆಂಗಳೂರು– 560 072.
5. ಪ್ರಾದೇಶಿಕ ನಿರ್ದೇಶಕರು, ಎನ್.ಸಿ.ಟಿ.ಇ., ಎಸ್.ಆರ್.ಸಿ.ಎಫ್., ನ್ಯಾಷನಲ್ ಲಾ ಸ್ಕೂಲ್ ಎದುರು, ನಾಗರಭಾವಿ ಬೆಂಗಳೂರು– 560 072.
6. ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶಕರು, 100 ಅಡಿ ರಿಂಗ್ ರಸ್ತೆ, ಬನಶಂಕರಿ 3ನೇ ಹಂತ ಬೆಂಗಳೂರು – 560 085.
7. ವಿಶೇಷಾಧಿಕಾರಿಗಳು, ಕೇಂದ್ರೀಕೃತ ಪ್ರವೇಶ ಘಟಕ, ಕಾವೇರಿ ಭವನದ ಎದುರು, ಬೆಂಗಳೂರು – 560 009.
8. ಉಪಕುಲಸಚಿವರು; ಅಧೀಕ್ಷಕರು; ಶೈಕ್ಷಣಿಕ ವಿಭಾಗ – 1/ 4 ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ–563 103.
9. ಸಮನ್ವಯಾಧಿಕಾರಿಗಳು, ಅಂಕಿ ಅಂಶಗಳ ವಿಭಾಗ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ– 563 103.
10. ಕಛೇರಿ ಪ್ರತಿ.